# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 2128 (2323) |
| ಮಾನ್ಯ ಸದಸ್ಯರ ಹೆಸರು | ಶ್ರೀ ಪ್ರದೀಪ್ ಶೆಟ್ಟರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | 27 /03/2026 |
| ಉತ್ತರಿಸುವವರು | ಮಾನ್ಯ ಕಾರ್ಮಿಕ ಸಚಿವರು |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದಲ್ಲಿ ಕಾರ್ಮಿಕ ಕಾರ್ಡ್ ಹೊಂದಿರುವ ಫಲಾನುಭವಿಗಳಿಗೆ ಕಾರ್ಮಿಕ ಇಲಾಖೆಯಿಂದ ನೀಡ ಲಾಗುತ್ತಿರುವ ಸೌಲಭ್ಯಗಳೇನು ಹಾಗೂ ಸೌಲಭ್ಯ ಪಡೆಯಲು ಬೇಕಾದ ಮಾನದಂಡಗಳೇನು; | ಕಾರ್ಮಿಕ ಇಲಾಖೆಯ ಅಧೀನದಲ್ಲಿ ಕಾರ್ಯನಿರ್ವ ಹಿಸುತ್ತಿರುವ ವಿವಿಧ ಮಂಡಳಿಗಳ ಮೂಲಕ ಜಾರಿಗೊಳಿಸುತ್ತಿರುವ ವಿವಿಧ ಯೋಜನೆಗಳಡಿ ಅರ್ಹ ಕಾರ್ಮಿಕರನ್ನು ಫಲಾನುಭವಿಗಳನ್ನಾಗಿ ನೋಂದಾಯಿಸುತ್ತಿದ್ದು, ಫಲಾನುಭವಿಗಳಿಗೆ ನೀಡಲಾಗುತ್ತಿರುವ ಸೌಲಭ್ಯಗಳು ಹಾಗೂ ಮಾನದಂಡಗಳ ವಿವರ ಈ ಕೆಳಕಂಡಂತಿದೆ.<br><br>**ಕರ್ನಾಟಕ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿ:**<br>ಈ ಮಂಡಳಿಯಿಂದ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರಿಗೆ ನೀಡಲಾಗುವ ವಿವಿಧ ಸೌಲಭ್ಯಗಳ ವಿವರಗಳನ್ನು **ಅನುಬಂಧ-1 ರಲ್ಲಿ** ಒದಗಿಸಿದೆ.<br><br>ಮಂಡಳಿಯ ಸೌಲಭ್ಯಗಳು ಘಟನೆಯ ಆಧಾರಿತವಾಗಿದ್ದು, ನೋಂದಾಯಿತ ಫಲಾನುಭವಿಗಳು ವಾರ್ಷಿಕವಾಗಿ ತಮ್ಮ ಸದಸ್ಯತ್ವವನ್ನು ನವೀಕರಿಸಿಕೊಳ್ಳುವ ಮೂಲಕ ಚಾಲ್ತಿಯಲ್ಲಿದ್ದಲ್ಲಿ **ಅನುಬಂಧ-1ರ** ಸೌಲಭ್ಯಗಳಿಗೆ ಅರ್ಹರಾಗುತ್ತಾರೆ. ಈ ಸೌಲಭ್ಯಗಳಿಗೆ ಅರ್ಜಿಗಳನ್ನು ಆನ್ ಲೈನ್ ಮೂಲಕ ಸಲ್ಲಿಸಬೇಕಿರುತ್ತದೆ.<br><br>**ಕರ್ನಾಟಕ ರಾಜ್ಯ ಅಸಂಘಟಿತ ಕಾರ್ಮಿಕರ ಸಾಮಾಜಿಕ ಭದ್ರತಾ ಮಂಡಳಿ:**<br>ಈ ಮಂಡಳಿಯು ಅಸಂಘಟಿತ ಕಾರ್ಮಿಕರಿಗೆ ಸಾಮಾಜಿಕ ಭದ್ರತಾ ಸೌಲಭ್ಯವನ್ನು ಒದಗಿಸುವ ಯೋಜನೆಗಳನ್ನು ಜಾರಿಗೊಳಿಸುತ್ತಿದ್ದು, ವಿವರ ಈ ಕೆಳಗಿನಂತಿವೆ. |

1. **<u>ಅಂಬೇಡ್ಕರ್ ಕಾರ್ಮಿಕ ಸಹಾಯ ಹಸ್ತ ಯೋಜನೆ:-</u>**

ಈ ಯೋಜನೆಯಡಿ ಅಸಂಘಟಿತ ವಲಯದ ವೃತ್ತಿಯಲ್ಲಿ ತೊಡಗಿರುವ ಕಾರ್ಮಿಕರು ಹಾಗೂ ಅಲೆಮಾರಿ ಹಾಗೂ ಅರೆ ಅಲೆಮಾರಿ ಪಂಗಡದ ಕುಲಕಸುಬಿನ ವೃತ್ತಿ ಆಧಾರಿತ ಕೆಲಸದಲ್ಲಿ ತೊಡಗಿರುವ ಕಾರ್ಮಿಕರು ಸೇರಿದಂತೆ ಒಟ್ಟಾರೆ 102 ವರ್ಗಗಳ ಕಾರ್ಮಿಕರನ್ನು ಉಚಿತವಾಗಿ ನೋಂದಾಯಿಸಿ, ಈ ಕೆಳಕಂಡ ಸೌಲಭ್ಯಗಳನ್ನು ಒಳಗೊಂಡಂತೆ ಸ್ಮಾರ್ಟ್ ಕಾರ್ಡ್ ನೀಡಲಾಗುತ್ತಿದೆ.

**<u>ದೊರಕುವ ಸೌಲಭ್ಯಗಳು</u>**

**ಅ) ಅಪಘಾತ ಪರಿಹಾರ ಸೌಲಭ್ಯ:**

- ಅಪಘಾತದಿಂದ ಮರಣ ಹೊಂದಿದಲ್ಲಿ ಅವರ ನಾಮ ನಿರ್ದೇಶಿತರಿಗೆ ರೂ.1 ಲಕ್ಷ ಪರಿಹಾರ.
- ಅಪಘಾತದಿಂದ ಶಾಶ್ವತ/ ಭಾಗಶಃ ದುರ್ಬಲತೆ ಹೊಂದಿದಲ್ಲಿ ರೂ.1.00 ಲಕ್ಷಗಳವರೆಗೆ ಪರಿಹಾರ (ಶೇಕಡವಾರು ದುರ್ಬಲತೆ ಆಧಾರದ ಮೇಲೆ).
- ಆಸ್ಪತ್ರೆ ವೆಚ್ಚ ಮರುಪಾವತಿ ರೂ.50,000/- ಗಳವರೆಗೆ. (ಅಪಘಾತ ಪ್ರಕರಣಗಳಲ್ಲಿ ಮಾತ್ರ)

**<u>ಅರ್ಹತೆ/ಮಾನದಂಡಗಳು:-</u>**

- ಈ ಯೋಜನೆಯು ಕರ್ನಾಟಕ ರಾಜ್ಯದ ನಿವಾಸಿಗಳಿಗೆ ಮಾತ್ರ ಅನ್ವಯವಾಗುತ್ತದೆ.
- ಅರ್ಜಿದಾರರ ವಯೋಮಿತಿ 18 ರಿಂದ 60 ವರ್ಷಗಳು.
- 102 ವರ್ಗಗಳ ಅಸಂಘಟಿತ ಕಾರ್ಮಿಕರಿಗೆ ಮಾತ್ರ ಅನ್ವಯಿಸುತ್ತದೆ.
- ಆದಾಯ ತೆರಿಗೆ ಪಾವತಿದಾರರಾಗಿರಬಾರದು.
- ಇ.ಎಸ್.ಐ ಮತ್ತು ಇ.ಪಿ.ಎಫ್ ಸೌಲಭ್ಯ ಹೊಂದಿರಬಾರದು.

2. **<u>ಕರ್ನಾಟಕ ರಾಜ್ಯ ಗಿಗ್ ಕಾರ್ಮಿಕರ ವಿಮಾ ಯೋಜನೆ:-</u>**

ಇ-ಕಾಮರ್ಸ್ ವಲಯಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ಸ್ವಿಗ್ಗಿ, ಜೊಮಾಟೋಗಳಂತಹ ಸಂಸ್ಥೆಗಳಲ್ಲಿ ಫುಡ್‌ಡೆಲಿವರಿ ಮಾಡುವ ಹಾಗೂ ಮುಂತಾದ ಡೆಲಿವರಿ ವೃತ್ತಿಯಲ್ಲಿ ತೊಡಗಿಕೊಂಡ ಎಲ್ಲಾ ಅಸಂಘಟಿತ ಗಿಗ್ ಕಾರ್ಮಿಕರು ಸೇವಾ ಸಿಂಧು

| | | |
|---|---|---|
| | | ಹಾಗೂ ಇ-ಶ್ರಮ್ ಪೋರ್ಟಲ್‌ಗಳ ಮೂಲಕ ನೋಂದಾಯಿಸಿಕೊಂಡು ಸ್ಮಾರ್ಟ್ ಕಾರ್ಡ್ ಪಡೆಯುವ ಮೂಲಕ ಈ ಕೆಳಕಂಡ ಸೌಲಭ್ಯಗಳನ್ನು ಪಡೆಯಬಹುದಾಗಿದೆ:<br><br>**<u>ದೊರಕುವ ಸೌಲಭ್ಯಗಳು:-</u>**<br>• ಅಪಘಾತದಿಂದ ಮರಣ ಹೊಂದಿದಲ್ಲಿ ವಿಮಾ ಪರಿಹಾರ ರೂ.2.00 ಲಕ್ಷ ಹಾಗೂ ರೂ.2.00 ಲಕ್ಷ ಜೀವ ವಿಮಾ ಸೇರಿ ಒಟ್ಟು ರೂ.4.00 ಲಕ್ಷಗಳು.<br>• ಅಪಘಾತದಿಂದ ಶಾಶ್ವತ ದುರ್ಬಲತೆ ಹೊಂದಿದಲ್ಲಿ ರೂ.2.00 ಲಕ್ಷಗಳವರೆಗೆ.<br>• ಆಸ್ಪತ್ರೆ ವೆಚ್ಚ ಮರುಪಾವತಿ ರೂ.1.00 ಲಕ್ಷಗಳವರೆಗೆ (ಅಪಘಾತ ಪ್ರಕರಣಗಳಿಗೆ ಮಾತ್ರ)<br>• ಜೀವ ವಿಮಾ ರೂ.2.00 ಲಕ್ಷಗಳು.<br><br>ಮುಂದುವರೆದು, ಗಿಗ್ ಕಾರ್ಮಿಕರಿಗೆ ಸಾಮಾಜಿಕ ಭದ್ರತಾ ಸೌಲಭ್ಯಗಳನ್ನು ಒದಗಿಸುವ ಉದ್ದೇಶದಿಂದ ಸಂಪನ್ಮೂಲ ಕ್ರೋಢೀಕರಿಸಲು Karnataka Platform based Gig Workers (Social Security and Welfare) Act, 2025 ಅನ್ನು **ದಿನಾಂಕ:12-09-2025** ರಂದು ಸರ್ಕಾರವು ಅಧಿಸೂಚಿಸಿ ರುತ್ತದೆ ಮತ್ತು ಇದಕ್ಕನುಗುಣವಾಗಿ ನಿಯಮಾವಳಿಯನ್ನು **ದಿನಾಂಕ: 19-11-2025** ರಂದು ಅಧಿಸೂಚಿಸಲಾಗಿ ಮಂಡಳಿ ಯನ್ನು ರಚಿಸಲಾಗಿರುತ್ತದೆ. ಈ ಕಾಯ್ದೆಯಡಿ ಸುಂಕದ ರೂಪದಲ್ಲಿ ಸಂಗ್ರಹವಾಗಬಹುದಾದ ಅನುದಾನದಿಂದ ಮುಂದಿನ ದಿನಗಳಲ್ಲಿ ವಿವಿಧ ಸಾಮಾಜಿಕ ಭದ್ರತಾ ಯೋಜನೆಗಳನ್ನು ರೂಪಿಸಿ ಜಾರಿಗೊಳಿಸಲಾಗುವುದು.<br><br>**<u>ಅರ್ಹತೆ/ಮಾನದಂಡಗಳು:-</u>**<br>• 18 ರಿಂದ 60 ವಯೋಮಾನದವರಾಗಿರಬೇಕು. ಆದಾಯ ತೆರಿಗೆ ಪಾವತಿದಾರರಾಗಿರಬಾರದು.<br>• ಭವಿಷ್ಯನಿಧಿ ಹಾಗೂ ಇ.ಎಸ್.ಐ ಫಲಾನುಭವಿಯಾಗಿರಬಾರದು.<br>• ಕರ್ನಾಟಕದಲ್ಲಿ ಗಿಗ್ ವೃತ್ತಿ (ಡೆಲಿವರಿ ಕಾರ್ಯ) ನಿರ್ವಹಿಸುತ್ತಿರುವವರಿಗೆ ಮಾತ್ರ.<br><br>**(3) <u>ಕರ್ನಾಟಕ ರಾಜ್ಯ ದಿನಪತ್ರಿಕೆ ಹಾಗೂ ಹಾಲು ವಿತರಣಾ ಕಾರ್ಮಿಕರ ಅಪಘಾತ ಪರಿಹಾರ ಮತ್ತು ವೈದ್ಯಕೀಯ ಸೌಲಭ್ಯ ಯೋಜನೆ:-</u> :-**<br><br>ದಿನಪತ್ರಿಕೆ ಹಾಗೂ ಹಾಲು ವಿತರಿಸುವ ಕಾರ್ಮಿಕರಿಗೆ ಸಾಮಾಜಿಕ ಭದ್ರತೆ ಒದಗಿಸುವ ಉದ್ದೇಶದಿಂದ ಈ ಯೋಜನೆಯನ್ನು ಜಾರಿಗೊಳಿಸಿದ್ದು, ಸದರಿ ಕಾರ್ಮಿಕರನ್ನು |

ಮಂಡಳಿಯ ಪೋರ್ಟಲ್ ಮೂಲಕ ನೋಂದಾಯಿಸಲಾಗುತ್ತಿದೆ.

**ದೊರಕುವ ಸೌಲಭ್ಯಗಳು:**

- ಅಪಘಾತದಿಂದ ಮರಣ ಹೊಂದಿದಲ್ಲಿ ರೂ2.00 ಲಕ್ಷ.
- ಅಪಘಾತದಿಂದ ಶಾಶ್ವತ ದುರ್ಬಲತೆ ಹೊಂದಿದಲ್ಲಿ ರೂ.2.00 ಲಕ್ಷಗಳವರೆಗೆ (ಶೇಕಡವಾರು ದುರ್ಬಲತೆ ಆಧಾರದ ಮೇಲೆ).
- ಅಪಘಾತ ಅಥವಾ ಮಾರಣಾಂತಿಕ ಕಾಯಿಲೆ ಅಥವಾ ಗಂಭೀರ ಅನಾರೋಗ್ಯಕ್ಕೆ ತುತ್ತಾದಲ್ಲಿ ಆಸ್ಪತ್ರೆ ವೆಚ್ಚ ಮರುಪಾವತಿ ರೂ.1.00 ಲಕ್ಷಗಳವರೆಗೆ.
- ಸಹಜ ಮರಣ ಪರಿಹಾರ (ಅಂತ್ಯಕ್ರಿಯೆ ಧನಸಹಾಯ):- ರೂ.10,000/-ಗಳು

**ಅರ್ಹತೆ/ಮಾನದಂಡಗಳು:-**

- ಕರ್ನಾಟಕ ರಾಜ್ಯದ ನಿವಾಸಿಯಾಗಿರಬೇಕು.
- 16 ರಿಂದ 70 ವಯೋಮಾನದವರಾಗಿರಬೇಕು.
- ಆದಾಯ ತೆರಿಗೆ ಪಾವತಿದಾರರಾಗಿರಬಾರದು, ಇ.ಎಸ್ .ಐ ಮತ್ತು ಇ.ಪಿ.ಎಫ್ ಸೌಲಭ್ಯ ಹೊಂದಿರಬಾರದು.

3. **ಕರ್ನಾಟಕ ರಾಜ್ಯ ಮೋಟಾರು ಸಾರಿಗೆ ಹಾಗೂ ಇತರೆ ಸಂಬಂಧಿತ ಕಾರ್ಮಿಕರ ಸಾಮಾಜಿಕ ಭದ್ರತೆ ಮತ್ತು ಕ್ಷೇಮಾಭಿವೃದ್ಧಿ ಮಂಡಳಿ:**

ಮೋಟಾರು ಸಾರಿಗೆ ಹಾಗೂ ಇತರ ಸಂಬಂಧಿತ ಕಾರ್ಮಿಕರಿಗೆ ಸಾಮಾಜಿಕ ಭದ್ರತೆ ರಾಜ್ಯ ಖಾಸಗಿ ವಾಣಿಜ್ಯ ಸಾರಿಗೆ ಕಾರ್ಮಿಕರ ಅಪಘಾತ ಹಾಗೂ ಕಲ್ಯಾಣ ಸೌಲಭ್ಯಗಳನ್ನು ಒದಗಿಸಲು ಅಗತ್ಯವಿರುವ ಸಂಪನ್ಮೂಲ ಕ್ರೋಢೀಕರಣದ ಉದ್ದೇಶದಿಂದ, ಕರ್ನಾಟಕ ಮೋಟಾರು ಸಾರಿಗೆ ಮತ್ತು ಇತರೆ ಸಂಬಂಧಿತ ಕಾರ್ಮಿಕರ ಸಾಮಾಜಿಕ ಭದ್ರತೆ ಮತ್ತು ಕ್ಷೇಮಾಭಿವೃದ್ಧಿ ವಿಧೇಯಕ, 2024ನ್ನು ಅಧಿಸೂಚಿಸಲಾಗಿದ್ದು, ಫಲಾನುಭವಿಗಳಿಗೆ ಸೌಲಭ್ಯಗಳನ್ನು ವಿತರಿಸಲು ಪ್ರತ್ಯೇಕವಾಗಿ, ಕರ್ನಾಟಕ ಮೋಟಾರು ಸಾರಿಗೆ ಮತ್ತು ಇತರೆ ಸಂಬಂಧಿತ ಕಾರ್ಮಿಕರ ಸಾಮಾಜಿಕ ಭದ್ರತೆ ಮತ್ತು ಕ್ಷೇಮಾಭಿವೃದ್ಧಿ ಅಧಿನಿಯಮ-2024ನ್ನು ಅಧಿಸೂಚಿ ಸಿದ್ದು, ಇದಕ್ಕೆ ಅನುಗುಣವಾಗಿ ನಿಯಮಾವಳಿಗಳನ್ನು ರೂಪಿಸಿ "**ಕರ್ನಾಟಕ ರಾಜ್ಯ ಮೋಟಾರು ಸಾರಿಗೆ ಹಾಗೂ ಇತರೆ ಸಂಬಂಧಿತ ಕಾರ್ಮಿಕರ ಸಾಮಾಜಿಕ ಭದ್ರತೆ ಮತ್ತು**

**ಕ್ಷೇಮಾಭಿವೃದ್ಧಿ ಮಂಡಳಿ**"ಯನ್ನು ದಿನಾಂಕ:07-10-2024ರಂದು ರಚಿಸಲಾಗಿರುತ್ತದೆ.

**<u>ದೊರಕುವ ಸೌಲಭ್ಯಗಳು</u>** :-

**(ಅ) ಅಪಘಾತ ಪರಿಹಾರ ಸೌಲಭ್ಯ:**

- ಅಪಘಾತದಿಂದ ಫಲಾನುಭವಿಗಳು ನಿಧನರಾದಲ್ಲಿ, ನಾಮನಿರ್ದೇಶಿತರಿಗೆ ರೂ.5 ಲಕ್ಷಗಳ ಪರಿಹಾರ.
- ಅಪಘಾತದಿಂದ ಶಾಶ್ವತ ದುರ್ಬಲತೆ ಹೊಂದಿದಾಗ, ಫಲಾನುಭವಿಗೆ ದುರ್ಬಲತೆಯ ಪ್ರಮಾಣಕ್ಕನುಗುಣವಾಗಿ ರೂ.2 ಲಕ್ಷಗಳ ವರೆಗೆ ಪರಿಹಾರ.
- ಅಪಘಾತದಿಂದ ತಾತ್ಕಾಲಿಕ ದುರ್ಬಲತೆ ಹೊಂದಿದಾಗ- ಆಸ್ಪತ್ರೆ ವೆಚ್ಚ ಮರುಪಾವತಿ ರೂ.1.00 ಲಕ್ಷದವರೆಗೆ.

**(ಆ) ನೈಸರ್ಗಿಕ ಮರಣ ಪರಿಹಾರ ಹಾಗೂ ಅಂತ್ಯಸಂಸ್ಕಾರ ವೆಚ್ಚ:**

ಸಹಜ ಮರಣ ಹೊಂದಿದ ಫಲಾನುಭವಿಗಳ ಅವಲಂಬಿತರಿಗೆ ಅಂತ್ಯ ಸಂಸ್ಕಾರದ ವೆಚ್ಚವೂ ಸೇರಿದಂತೆ ರೂ.25,000/-ಗಳ ಪರಿಹಾರ.

**(ಇ) ಶೈಕ್ಷಣಿಕ ಧನಸಹಾಯ :**

- ನೋಂದಾಯಿತ ಫಲಾನುಭವಿಯ ಗರಿಷ್ಠ ಇಬ್ಬರು ಮಕ್ಕಳಿಗೆ:-
  - 12ನೇ ತರಗತಿ ಅಥವಾ ತತ್ಸಮಾನ - ವಾರ್ಷಿಕ ತಲಾ ರೂ.3,000/-
  - ಪದವಿ ಅಥವಾ ತತ್ಸಮಾನ - ವಾರ್ಷಿಕ ತಲಾ ರೂ.5,500/-
  - ಇಂಜಿನಿಯರಿಂಗ್ ಹಾಗೂ ವೈದ್ಯಕೀಯ ಶಿಕ್ಷಣ - ವಾರ್ಷಿಕ ತಲಾ ರೂ.8,000/-
  - ಸ್ನಾತಕೋತ್ತರ ಪದವಿ - ವಾರ್ಷಿಕ ತಲಾ ರೂ.11,000/-
- ಅಪಘಾತದಿಂದ ನಿಧನರಾದ/ ಸಂಪೂರ್ಣ ಶಾಶ್ವತ ದುರ್ಬಲತೆ ಹೊಂದಿದ ಫಲಾನುಭವಿಯ ಗರಿಷ್ಠ ಇಬ್ಬರು ಮಕ್ಕಳಿಗೆ:-
  - 1ನೇ ತರಗತಿಯಿಂದ ಪದವಿ ಅಥವಾ ತತ್ಸಮಾನ - ವಾರ್ಷಿಕ ತಲಾ ರೂ.10,000/-
  - ಇಂಜಿನಿಯರಿಂಗ್ ಹಾಗೂ ವೈದ್ಯಕೀಯ ಶಿಕ್ಷಣ - ವಾರ್ಷಿಕ ತಲಾ ರೂ.20,000/-
  - ಸ್ನಾತಕೋತ್ತರ ಪದವಿ - ವಾರ್ಷಿಕ ತಲಾ ರೂ.25,000/-

**(ಈ) ಹೆರಿಗೆ ಸಹಾಯ ಧನ:**

ಫಲಾನುಭವಿಯ ಮೊದಲ ಎರಡು ಹೆರಿಗೆಗಳಿಗೆ ಮಾತ್ರ ಸೀಮಿತಗೊಂಡಂತೆ ತಲಾ ರೂ.10,000/-ಗಳು.

**ಅರ್ಹತೆ/ಮಾನದಂಡಗಳು:-**

- ಈ ಯೋಜನೆಯು ಕರ್ನಾಟಕ ರಾಜ್ಯಕ್ಕೆ ಮಾತ್ರ ಅನ್ವಯಿಸುತ್ತದೆ.
- ವಯೋಮಿತಿ 18 ರಿಂದ 60 ವರ್ಷಗಳು. (ಚಾಲಕರಿಗೆ ಸಂಬಂಧಿಸಿದಂತೆ 18 ರಿಂದ 70 ವರ್ಷಗಳು)
- ಆದಾಯ ತೆರಿಗೆ ಪಾವತಿದಾರರಾಗಿರಬಾರದು.
- ಇ.ಎಸ್.ಐ ಮತ್ತು ಇ.ಪಿ.ಎಫ್ ಸೌಲಭ್ಯ ಹೊಂದಿರಬಾರದು.
- ಯೋಜನೆಯ ಸೌಲಭ್ಯಗಳು ಕರ್ತವ್ಯದಲ್ಲಿರುವಾಗ ಹಾಗೂ ಇಲ್ಲದಿರುವಾಗಲೂ ಸಹ ಲಭ್ಯವಾಗುತ್ತವೆ.

ಚಾಲಕರು, ಕರ್ನಾಟಕ ರಾಜ್ಯ ಸಾರಿಗೆ ಇಲಾಖೆಯಿಂದ ವಾಣಿಜ್ಯ ವಾಹನ ಚಲಾಯಿಸಲು ಊರ್ಜಿತ ಚಾಲನಾ ಪರವಾನಗಿಯನ್ನು ಹೊಂದಿರುವುದು ಕಡ್ಡಾಯ. ಕರ್ನಾಟಕ ಕಾರ್ಮಿಕ ಕಲ್ಯಾಣ ಮಂಡಳಿಯಲ್ಲಿ ಕಾರ್ಮಿಕ ಕಾರ್ಡ್ ನೀಡಿರುವ ವ್ಯವಸ್ಥೆಯಿರುವುದಿಲ್ಲ.

**ಕರ್ನಾಟಕ ಕಾರ್ಮಿಕ ಕಲ್ಯಾಣ ಮಂಡಳಿ:**

ಈ ಮಂಡಳಿಗೆ ಸಂಘಟಿತ ಕಾರ್ಮಿಕರಿಂದ ರೂ.50/- ಮತ್ತು ಪ್ರತಿ ಕಾರ್ಮಿಕರಿಗೆ ಮಾಲೀಕ ರಿಂದ ರೂ.100/- ರಂತೆ ಹಾಗೂ ಸರ್ಕಾರದಿಂದ ಪ್ರತಿ ಕಾರ್ಮಿಕ ರಿಂದ ರೂ.50/- ರಂತೆ ವಂತಿಗೆಯಾಗಿ ಪಾವತಿಸಲಾಗುತ್ತಿದೆ. ಆ ವಂತಿಗೆಯ ಮೊತ್ತವನ್ನು ಸಂಘಟಿತ ಕಾರ್ಮಿಕರು ಮತ್ತು ಅವರ ಕುಟುಂಬದ ಅವಲಂಬಿತರಿಗೆ ಕಲ್ಯಾಣ ಯೋಜನೆಗಳಡಿ ಈ ಕೆಳಕಂಡ ಸೌಲಭ್ಯಗಳನ್ನು ನೀಡಲಾಗುತ್ತಿದೆ.

1) ಕಾರ್ಮಿಕರ ಮಕ್ಕಳಿಗೆ ಶೈಕ್ಷಣಿಕ ಪ್ರೋತ್ಸಾಹ ಧನಸಹಾಯ
2) ಕಾರ್ಮಿಕರಿಗೆ ವೈದ್ಯಕೀಯ ನೆರವು
3) ಕಾರ್ಮಿಕರಿಗೆ ಅಪಘಾತ ಧನಸಹಾಯ
4) ಮಹಿಳಾ ಕಾರ್ಮಿಕರಿಗೆ ಹೆರಿಗೆ ಭತ್ಯೆ ಸೌಲಭ್ಯ
5) ಮೃತ ಕಾರ್ಮಿಕನ ಅಂತ್ಯಸಂಸ್ಕಾರಕ್ಕೆ ಧನಸಹಾಯ
6) ವಾರ್ಷಿಕ ವೈದ್ಯಕೀಯ ತಪಾಸಣೆ ಶಿಬಿರಹಮ್ಮಿಕೊಳ್ಳುವ ಟ್ರೇಡ್‌ಯೂನಿಯನ್/ ಸಂಸ್ಥೆಗಳಿಗೆ ಧನಸಹಾಯ

7) ವಾರ್ಷಿಕ ಕ್ರೀಡಾಕೂಟ ಹಮ್ಮಿಕೊಳ್ಳುವ ನೊಂದಾಯಿತ ಕಾರ್ಮಿಕ ಸಂಘಗಳಿಗೆ ಧನಸಹಾಯ

ಕರ್ನಾಟಕ ಕಾರ್ಮಿಕ ಕಲ್ಯಾಣ ಮಂಡಳಿಯ ವಿವಿಧ ಕಲ್ಯಾಣ ಯೋಜನೆಗಳಡಿ ಸೌಲಭ್ಯ ಪಡೆಯಲು ಇರುವ ಮಾನದಂಡನೆ ಗಳ ವಿವರಗಳು ಈ ಕೆಳಕಂಡಂತಿದೆ.

| ಕ್ರ. ಸಂ. | ಯೋಜನೆಯ ವಿವರ | ಮಾನದಂಡನೆಗಳು |
|---|---|---|
| 1 | ಕಾರ್ಮಿಕರ ಮಕ್ಕಳಿಗೆ ಶೈಕ್ಷಣಿಕ ಪ್ರೋತ್ಸಾಹ ಧನಸಹಾಯ | • ಅರ್ಜಿ ಸಲ್ಲಿಸಲು ಸಾಮಾನ್ಯ ವರ್ಗದ ವಿದ್ಯಾರ್ಥಿಗಳು ಶೇ. 50 ಹಾಗೂ ಪ.ಜಾ/ ಪ.ಪಂಗಡದ ವಿದ್ಯಾರ್ಥಿಗಳು ಶೇ.45 ರಷ್ಟು ಅಂಕ ಪಡೆದು ತೇರ್ಗಡೆಯಾಗಿರಬೇಕು.<br>• ಒಂದು ಕುಟುಂಬದಲ್ಲಿ ಇಬ್ಬರೂ ವಿದ್ಯಾರ್ಥಿಗೆ ಮಾತ್ರ ಈ ಸೌಲಭ್ಯ ನೀಡಲಾಗುವುದು.<br>• ಮಂಡಳಿಗೆ ವಂತಿಗೆ ಪಾವತಿಸುವ ಕಾರ್ಮಿಕರ ಮಾಸಿಕ ವೇತನ ರೂ.35,000/- ಗಳ ಒಳಗಿರಬೇಕು. |
| 2 | ಕಾರ್ಮಿಕರಿಗೆ ವೈದ್ಯಕೀಯ ನೆರವು | • ಅರ್ಜಿದಾರರು ಅರ್ಜಿಯನ್ನು ಚಿಕಿತ್ಸೆ ಪಡೆದ 06 ತಿಂಗಳ ಅವಧಿಯೊಳಗೆ ಮಂಡಳಿಗೆ ಸಲ್ಲಿಸತಕ್ಕದ್ದು.<br>• ವಯೋಮಿತಿ 18-60 ವರ್ಷ |
| 3 | ಕಾರ್ಮಿಕರಿಗೆ ಅಪಘಾತ ಧನಸಹಾಯ | • ಕಾರ್ಮಿಕರಿಗೆ ಕೆಲಸದ ಸ್ಥಳದಲ್ಲಿ ಅಪಘಾತವಾದಲ್ಲಿ ಧನಸಹಾಯ ನೀಡಲಾಗುವುದು.<br>• ಸೌಲಭ್ಯ ಪಡೆಯುವ ಕಾರ್ಮಿಕರು ಅಪಘಾತವಾದ 03 ತಿಂಗಳೊಳಗೆ ಅರ್ಜಿಯನ್ನು ಮಂಡಳಿಗೆ ಸಲ್ಲಿಸತಕ್ಕದ್ದು.<br>• ವಯೋಮಿತಿ 18-60 ವರ್ಷ |
| 4 | ಮಹಿಳಾ ಕಾರ್ಮಿಕರಿಗೆ ಹೆರಿಗೆ ಭತ್ಯೆ ಸೌಲಭ್ಯ | • ಮಹಿಳಾ ಕಾರ್ಮಿಕರಿಗೆ ಮೊದಲ 2 ಮಕ್ಕಳಿಗೆ ಮಾತ್ರ ಹೆರಿಗೆ ಭತ್ಯೆ ಸೌಲಭ್ಯವನ್ನು ನೀಡಲಾಗುವುದು.<br>• ಮಗು ಜನಿಸಿದ 06 ತಿಂಗಳೊಳಗೆ ಅರ್ಜಿಯನ್ನು ಮಂಡಳಿಗೆ ಸಲ್ಲಿಸತಕ್ಕದ್ದು.<br>• ವಯೋಮಿತಿ 18-60 ವರ್ಷ |
| 5 | ಮೃತ ಕಾರ್ಮಿಕನ ಅಂತ್ಯಸಂಸ್ಕಾರಕ್ಕೆ ಧನಸಹಾಯ | • ಮೃತರ ಕುಟುಂಬದ ಅವಲಂಬಿತರು ಕಾರ್ಮಿಕ ಮೃತಪಟ್ಟ 06 ತಿಂಗಳೊಳಗೆ ನಿಗಧಿತ ಅರ್ಜಿ ನಮೂನೆಯಲ್ಲಿ ಸೂಕ್ತ ದಾಖಲೆಗಳೊಂದಿಗೆ ಮಂಡಳಿಗೆ ಅರ್ಜಿ ಸಲ್ಲಿಸತಕ್ಕದ್ದು.<br>• ವಯೋಮಿತಿ 18-60 ವರ್ಷ |
| 6 | ವಾರ್ಷಿಕ ವೈದ್ಯಕೀಯ ತಪಾಸಣೆ ಶಿಬಿರ | • ನೋಂದಾಯಿತ ಕಾರ್ಮಿಕ ಸಂಘಟನೆಗಳು ಕಲ್ಯಾಣ |

<table>
<tr>
<td></td>
<td></td>
<td>
<table>
<tr><td></td><td>ಹಮ್ಮಿಕೊಳ್ಳುವ ಟ್ರೇಡ್ಯೂನಿಯನ್/ ಸಂಸ್ಥೆಗಳಿಗೆ ಧನಸಹಾಯ</td><td>ಆಯುಕ್ತರ ಪೂರ್ವಾನುಮತಿಯೊಂದಿಗೆ ಹಮ್ಮಿಕೊಳ್ಳುವ ವಾರ್ಷಿಕ ಆರೋಗ್ಯ ತಪಾಸಣೆ ಶಿಬಿರಕ್ಕೆ ಧನಸಹಾಯ ನೀಡಲಾವುದು.</td></tr>
<tr><td>7</td><td>ವಾರ್ಷಿಕ ಕ್ರೀಡಾಕೂಟ ಹಮ್ಮಿ ಕೊಳ್ಳುವ ನೊಂದಾ ಯಿತ ಕಾರ್ಮಿಕ ಸಂಘಗಳಿಗೆ ಧನಸಹಾಯ</td><td>• ನೋಂದಾಯಿತ ಕಾರ್ಮಿಕ ಸಂಘಟನೆಗಳು ಕಲ್ಯಾಣ ಆಯುಕ್ತರ ಪೂರ್ವಾನು ಮತಿಯೊಂದಿಗೆ ವಾರ್ಷಿಕ ಕ್ರೀಡಾಕೂಟ ಹಮ್ಮಿಕೊಂಡಲ್ಲಿ ಧನಸಹಾಯ ನೀಡಲಾಗುವುದು.</td></tr>
</table>
</td>
</tr>
<tr>
<td>ಆ)</td>
<td>ಕಳೆದ ಮೂರು ವರ್ಷಗಳಿಂದ ಧಾರವಾಡ ನಗರ ಪ್ರದೇಶ ಹಾಗೂ ಹುಬ್ಬಳ್ಳಿ ಸೆಂಟ್ರಲ್ ವಿಧಾನ ಸಭಾ ಕ್ಷೇತ್ರಕ್ಕೆ ಕಾರ್ಮಿಕ ಇಲಾಖೆಯಿಂದ ಬಿಡುಗಡೆ ಮಾಡಲಾಗಿರುವ ಅನುದಾನ ಎಷ್ಟು; ಹಾಗೂ ಸದರಿ ಅನುದಾನವನ್ನು ಯಾವ ಕಾರಣಕ್ಕಾಗಿ ವಿನಿಯೋಗಿಸ ಲಾಗುತ್ತಿದೆ?</td>
<td>ಕಾರ್ಮಿಕ ಇಲಾಖೆಯ ಅಧೀನದಲ್ಲಿ ಕಾರ್ಯ ನಿರ್ವಹಿಸುತ್ತಿರುವ ವಿವಿಧ ಮಂಡಳಿಗಳ ಮೂಲಕ ಜಾರಿಗೊಳಿಸುತ್ತಿರುವ ವಿವಿಧ ಯೋಜನೆ ಗಳಲ್ಲಿ ಕಾರ್ಮಿಕರನ್ನು ಫಲಾನುಭವಿಗಳನ್ನಾಗಿ ನೋಂದಾಯಿಸುತ್ತಿದ್ದು, ಕಳೆದ ಮೂರು ವರ್ಷಗಳಿಂದ ಧಾರವಾಡ ನಗರ ಪ್ರದೇಶ ಹಾಗೂ ಹುಬ್ಬಳ್ಳಿ ಸೆಂಟ್ರಲ್ ವಿಧಾನ ಸಭಾ ಕ್ಷೇತ್ರಕ್ಕೆ ಸಂಬಂಧಿಸಿದಂತೆ, ಅನುದಾನದ ವಿವರ ಈ ಕೆಳಕಂಡಂತಿದೆ.<br><br><u>ಕರ್ನಾಟಕ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿ:</u><br>ಈ ಮಂಡಳಿಯಿಂದ ಯಾವುದೇ ಜಿಲ್ಲೆ, ತಾಲ್ಲೂಕು ಮತ್ತು ವಿಧಾನ ಸಭಾ ಕ್ಷೇತ್ರಕ್ಕೆ ಅನುದಾನ ಬಿಡುಗಡೆ ಮಾಡಲಾಗುವುದಿಲ್ಲ. ಆದರೆ, ರಾಜ್ಯದಾದ್ಯಂತ ನೋಂದಣಿಯಾಗಿರುವ ಮಂಡಳಿಯ ಫಲಾನುಭವಿಗಳಿಗೆ ವಿವಿಧ ಸೌಲಭ್ಯಗಳಡಿ ಸಹಾಯಧನವನ್ನು ನೇರವಾಗಿ ಡಿಬಿಟಿ ಮೂಲಕ ಬ್ಯಾಂಕ್ ಖಾತೆಗಳಿಗೆ ಜಮೆ ಮಾಡಲಾಗುತ್ತದೆ. ಅದರಂತೆ, ಧಾರವಾಡ ನಗರ ಪ್ರದೇಶ ಹಾಗೂ ಹುಬ್ಬಳ್ಳಿ ಸೆಂಟ್ರಲ್ ವಿಧಾನ ಸಭಾ ಕ್ಷೇತ್ರಕ್ಕೆ ಒಳಪಡುವ ಕಾರ್ಮಿಕ ಇಲಾಖೆಯ ಹಿರಿಯ ಕಾರ್ಮಿಕ ನಿರೀಕ್ಷಕರು, 2ನೇ ವೃತ್ತ, ಧಾರವಾಡ, ಹಿರಿಯ ಕಾರ್ಮಿಕ ನಿರೀಕ್ಷಕರು, 2ನೇ ವೃತ್ತ, ಹುಬ್ಬಳ್ಳಿ ಮತ್ತು ಹಿರಿಯ ಕಾರ್ಮಿಕ ನಿರೀಕ್ಷಕರು, 3ನೇ ವೃತ್ತ, ಹುಬ್ಬಳ್ಳಿ ಇವರ ಕಛೇರಿಯ ವ್ಯಾಪ್ತಿಯ ನೋಂದಾಯಿತ ಫಲಾನುಭವಿಗಳು ಕಳೆದ ಮೂರು ವರ್ಷಗಳಿಂದ ಪಡೆದುಕೊಂಡಿರುವ ಸಹಾಯಧನದ ವಿವರಗಳನ್ನು ಅನುಬಂಧ-2 ರಲ್ಲಿ ಒದಗಿಸಿದೆ.<br><br><u>ಕರ್ನಾಟಕ ರಾಜ್ಯ ಅಸಂಘಟಿತ ಕಾರ್ಮಿಕರ ಸಾಮಾಜಿಕ ಭದ್ರತಾ ಮಂಡಳಿ:</u><br>ಈ ಮಂಡಳಿಯು ಜಾರಿಗೊಳಿಸುತ್ತಿರುವ ವಿವಿಧ ಯೋಜನೆಗಳಡಿ ಫಲಾನುಭವಿಗಳಿಗೆ</td>
</tr>
</table>

ಸೌಲಭ್ಯಗಳನ್ನು ಒದಗಿಸಲು ರಾಜ್ಯಾವಾರು ಅನುದಾನವನ್ನು ಬಿಡುಗಡೆಗೊಳಿಸಲಾಗುತ್ತಿದ್ದು, ಜಿಲ್ಲಾವಾರು ಯಾವುದೇ ಅನುದಾನ ಬಿಡುಗಡೆಗೊಳಿಸಿರುವುದಿಲ್ಲ. ಕಳೆದ ಮೂರು ವರ್ಷಗಳಲ್ಲಿ ವಿವಿಧ ಯೋಜನೆಗಳಡಿ ಬಿಡುಗಡೆಯಾದ ರಾಜ್ಯಾವಾರು ಅನುದಾನದ ವಿವರ ಈ ಕೆಳಗಿನಂತಿಂದೆ.

| ಯೋಜನೆ ಮತ್ತು ಲೆಕ್ಕಶೀರ್ಷಿಕೆ | 2023-24 | 2024-25 | 2025-26 |
|---|---|---|---|
| | ಬಿಡುಗಡೆ ಯಾದ ಅನುದಾನ | ಬಿಡುಗಡೆ ಯಾದ ಅನುದಾನ | ಬಿಡುಗಡೆ ಯಾದ ಅನುದಾನ |
| ಕರ್ನಾಟಕ ರಾಜ್ಯ ಖಾಸಗಿ ವಾಣಿಜ್ಯ ಸಾರಿಗೆ ಕಾರ್ಮಿಕರ ಅಪಘಾತ ಪರಿಹಾರ ಯೋಜನೆ 2230-01-103-7-03(059) | 1000.00 | 1000.00 | 1000.00 |
| ಅಂಬೇಡ್ಕರ್ ಕಾರ್ಮಿಕ ಸಹಾಯ ಹಸ್ತ ಯೋಜನೆ 2230-01-111-0-05(059) | 500.00 | 500.00 | 1.00 |
| ಕರ್ನಾಟಕ ರಾಜ್ಯ ದಿನಪತ್ರಿಕೆ ವಿತರಣಾ ಕಾರ್ಮಿಕರ ಅಪಘಾತ ಪರಿಹಾರ ಹಾಗೂ ವೈದ್ಯಕೀಯ ಸೌಲಭ್ಯ ಯೋಜನೆ 2230-01-111-0-05(059) | 130.00 | 100.00 | - |
| ಕರ್ನಾಟಕ ರಾಜ್ಯ ಗಿಗ್ ಕಾರ್ಮಿಕರ ವಿಮಾ ಯೋಜನೆ 2230-01-111-0-05(100) | 100.00 | 100.00 | - |

**<u>ಕರ್ನಾಟಕ ಕಾರ್ಮಿಕ ಕಲ್ಯಾಣ ಮಂಡಳಿ:</u>**

ಕಳೆದ 3 ವರ್ಷಗಳಲ್ಲಿ ಸರ್ಕಾರದಿಂದ ಕರ್ನಾಟಕ ಕಾರ್ಮಿಕ ಕಲ್ಯಾಣ ಮಂಡಳಿಗೆ ಲೆಕ್ಕಶೀರ್ಷಿಕೆ:2230-01-103-04-00-104 ರಲ್ಲಿ ಬಿಡುಗಡೆಯಾದ ಅನುದಾನದ ವಿವರ ಈ ಕೆಳಕಂಡಂತಿವೆ.

| ಕ್ರ. ಸಂ. | ವರ್ಷ | ಸರ್ಕಾರದಿಂದ ಬಿಡುಗಡೆಯಾದ ಅನುದಾನ (ರೂ. ಲಕ್ಷಗಳಲ್ಲಿ) |
|---|---|---|
| 1 | 2023-24 | 500.00 |
| 2 | 2024-25 | 500.00 |
| 3 | 2025-26 | 1000.00 |

ಕರ್ನಾಟಕ ಕಾರ್ಮಿಕ ಕಲ್ಯಾಣ ಮಂಡಳಿಗೆ ಸರ್ಕಾರದಿಂದ ಬಿಡುಗಡೆಯಾದ ಅನುದಾನದ ಮೊತ್ತವನ್ನು ಪೂರ್ಣವಾಗಿ ವಿವಿಧ ಕಲ್ಯಾಣ ಯೋಜನೆಗಳಿಗೆ ವಿನಿಯೋಗಿಸಲಾಗುವುದು.

| | | |
|---|---|---|
| | | ಧಾರವಾಡ ನಗರ ಪ್ರದೇಶ ಹುಬ್ಬಳ್ಳಿ ಸೆಂಟ್ರಲ್ ವಿಧಾನಸಭಾ ಕ್ಷೇತ್ರಕ್ಕೆ ಸಂಬಂಧಿಸಿದಂತೆ ಸರ್ಕಾರದಿಂದ ಕಾರ್ಮಿಕ ಕಲ್ಯಾಣ ಮಂಡಳಿಗೆ ಪ್ರತ್ಯೇಕವಾಗಿ ಅನುದಾನ ಬಿಡುಗಡೆ ಮಾಡಿರುವುದಿಲ್ಲ. |

**ಕಾಇ 165 ಎಲ್ಇಟಿ 2026**

**(ಸಂತೋಷ್ ಎಸ್ ಲಾಡ್)**
**ಕಾರ್ಮಿಕ ಸಚಿವರು**

**ವಿಧಾನ ಪರಿಷತ್ತಿನ ಮಾನ್ಯ ಸದಸ್ಯರಾದ ಶ್ರೀ ಪ್ರದೀಪ್ ಶೆಟ್ಟರ್ (ಸ್ಥಳೀಯ ಸಂಸ್ಥೆಗಳಿಂದ ಚುನಾಯಿತರಾದವರು) ಇವರ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 2323(2128)ಕ್ಕೆ**

## ಅನುಬಂಧ-1

**ಮಂಡಳಿಯ ವತಿಯಿಂದ ಫಲಾನುಭವಿಗಳು ಮತ್ತು ಅವಲಂಭಿತರಿಗೆ ನೀಡುತ್ತಿರುವ ವಿವಿಧ ಕಲ್ಯಾಣ ಮತ್ತು ಸಾಮಾಜಿಕ ಭದ್ರತಾ ಸೌಲಭ್ಯಗಳ ವಿವರ**

1. **ಪಿಂಚಣಿ ಸೌಲಭ್ಯ:** ಮೂರು ವರ್ಷ ಸದಸ್ಯತ್ವದೊಂದಿಗೆ 60 ವರ್ಷ ಪೂರೈಸಿದ ಫಲಾನುಭವಿಗೆ ಮಾಸಿಕ ರೂ.3,000/-
2. **ಕುಟುಂಬ ಪಿಂಚಣಿ ಸೌಲಭ್ಯ:** ಮೃತ ಪಿಂಚಣಿದಾರರ ಪತಿ/ಪತ್ನಿಗೆ ಮಾಸಿಕ **ರೂ.1500/-**
3. **ದುರ್ಬಲತೆ ಪಿಂಚಣಿ:** ನೋಂದಾಯಿತ ಫಲಾನುಭವಿಯು ಖಾಯಿಲೆಗಳಿಂದ ಅಥವಾ ಕಟ್ಟಡ ಕಾಮಗಾರಿಗಳ ಅಪಘಾತದಿಂದ ಶಾಶ್ವತ /ಭಾಗಶಃ ಅಂಗ ವಿಕಲತೆ ಹೊಂದಿದ್ದರೆ ಮಾಸಿಕ **ರೂ.2,000/-** ಪಿಂಚಣಿ ಹಾಗೂ ಶೇಕಡವಾರು ದುರ್ಬಲತೆಯನ್ನಾಧರಿಸಿ **ರೂ. 2,00,000/-** ದವರೆಗೆ ಅನುಗ್ರಹರಾಶಿ ಸಹಾಯಧನ.
4. **ಕನ್ನಡಕ, ಶ್ರವಣಯಂತ್ರ, ಕೃತಕ ಕೈಕಾಲು ಮತ್ತು ಗಾಲಿ ಕುರ್ಚಿ** ಮರುಪಾವತಿ ಸೌಲಭ್ಯ (ಈ ಯೋಜನೆಯನ್ನು ಜಾರಿಗೊಳಿಸಲು ಕ್ರಮ ಕೈಗೊಳ್ಳಲಾಗುತ್ತಿದೆ).
5. **ಟ್ರೇನಿಂಗ್-ಕಮ್-ಟೂಲ್‌ಕಿಟ್ಸ್ ಸೌಲಭ್ಯ (ಶ್ರಮ ಸಾಮರ್ಥ್ಯ): ರೂ. 20,000/- ವರೆಗೆ.**
6. **ವಸತಿ ಸೌಲಭ್ಯ (ಕಾರ್ಮಿಕ ಗೃಹಭಾಗ್ಯ): ರೂ.2,00,000/-** ದವರೆಗೆ ಮುಂಗಡ ಸೌಲಭ್ಯ.
7. **ಹೆರಿಗೆ ಸೌಲಭ್ಯ (ತಾಯಿ ಲಕ್ಷ್ಮೀಬಾಂಡ್):** ಮಹಿಳಾ ಫಲಾನುಭವಿಯ ಮೊದಲ ಎರಡು ಮಗುವಿನ ಜನನಕ್ಕೆ ರೂ.50,000/-.
8. **ಅಂತ್ಯಕ್ರಿಯೆ ವೆಚ್ಚ: ರೂ. 4,000/-** ಹಾಗೂ ಅನುಗ್ರಹ ರಾಶಿ **ರೂ.1,46,000/-** ಸಹಾಯಧನ.
9. **ಶೈಕ್ಷಣಿಕ ಸಹಾಯಧನ:**

| ಕ್ರ ಸಂ | ಕೋರ್ಸ್/ತರಗತಿ | ತರಗತಿ/ಪದವಿ (ಪ್ರತಿ ವರ್ಷಕ್ಕೆ) (ರೂ.ಗಳಲ್ಲಿ) | ಸ್ನಾತಕೋತ್ತರ ಪದವಿ (ಪ್ರತಿ ವರ್ಷಕ್ಕೆ) (ರೂ.ಗಳಲ್ಲಿ) |
|---|---|---|---|
| 1 | 1ನೇ ತರಗತಿಯಿಂದ 5ನೇ ತರಗತಿ | 1,800/- | - |
| 2 | 6ನೇ ತರಗತಿಯಿಂದ 8ನೇ ತರಗತಿ | 2,400/- | - |
| 3 | 9 ಮತ್ತು 10ನೇ ತರಗತಿ | 3,000/- | - |
| 4 | ಪಿಯುಸಿ, 11 ಹಾಗೂ 12ನೇ ತರಗತಿ ಅಥವಾ ತತ್ಸಮಾನ ಕೋರ್ಸ್. | 6,000/- | - |
| 5 | 10ನೇ ತರಗತಿ ನಂತರದ ಐಟಿಐ/ ತತ್ಸಮಾನ ತಾಂತ್ರಿಕ ಕೋರ್ಸ್‌ಗಳು | 10,000/- | - |
| 6 | ಪಿಯುಸಿ ನಂತರದ ಯಾವುದೇ ಡಿಪ್ಲೋಮ ತರಗತಿ. | 12,000/- | - |
| 7 | ಸಾಮಾನ್ಯ ಪದವಿ (ಜನರಲ್ ಡಿಗ್ರಿ) - ಬಿಎ, ಬಿಕಾಂ, ಬಿಎಸ್ಸಿ ಮುಂತಾದವಗಳು | 15,000/- | 20,000/- |
| 8 | 03 ಅಥವಾ ಅದಕ್ಕಿಂತ ಹೆಚ್ಚಿನ ಅವಧಿಯ **Vocational** ವೃತ್ತಿಪರ ಕೋರ್ಸ್‌ಗಳು ಕಾನೂನು ಪದವಿ ಸಹಿತ (Professional Courses) | 20,000/- | 25,000/- |
| 9 | ಅಥವಾ ಅದಕ್ಕಿಂತ ಹೆಚ್ಚಿನ ಅವಧಿಯ ತಾಂತ್ರಿಕ ವೃತ್ತಿಪರ ಕೋರ್ಸ್‌ಗಳು (Professional Courses) | 25,000/- | 35,000/- |
| 10 | 03 ಅಥವಾ ಅದಕ್ಕಿಂತ ಹೆಚ್ಚಿನ ಅವಧಿಯ ಅರೆ ವೈದ್ಯಕೀಯ ವೃತ್ತಿಪರ ಕೋರ್ಸ್‌ಗಳು (Para | 20,000/- | 25,000/- |

| | | | |
|---|---|---|---|
| | Medical Courses) | | |
| **11** | 03 ಅಥವಾ ಅದಕ್ಕಿಂತ ಹೆಚ್ಚಿನ ಅವಧಿಯ ವೈದ್ಯಕೀಯ ವೃತ್ತಿಪರ ಕೋರ್ಸ್‌ಗಳು (Professional Courses) | **25,000/-** | **35,000/-** |
| **12** | ರಾಷ್ಟ್ರೀಯ ಕಾನೂನು ಶಾಲೆಗಳಿಗೆ ಸಮನಾದ ಕಾನೂನು ವಿದ್ಯಾ ಸಂಸ್ಥೆಗಳು | **40,000/-** | **50,000/-** |
| **13** | ಪಿಹೆಚ್‌ಡಿ/ಎಮ್‌ಫಿಲ್ (03 ವರ್ಷ ಅವಧಿಯವರೆಗೆ) | **40,000/-** | - |
| **14** | IIT, IIIT, AIMS, IISc, IISERC ನಂತಹ ಪ್ರತಿಷ್ಠಿತ ರಾಷ್ಟ್ರೀಯ ವಿದ್ಯಾಸಂಸ್ಥೆಗಳು. | **50,000/-** | **60,000/-** |

10. **ವೈದ್ಯಕೀಯ ಸಹಾಯ ಧನ (ಕಾರ್ಮಿಕ ಆರೋಗ್ಯ ಭಾಗ್ಯ):** ನೋಂದಾಯಿತ ಫಲಾನುಭವಿ ಹಾಗೂ ಅವರ ಅವಲಂಭಿತರಿಗೆ **ರೂ. 300/- ರಿಂದ ರೂ. 20,000/- ವರೆಗೆ.**
11. **ಅಪಘಾತ ಪರಿಹಾರ:** ನೊಂದಾಯಿತ ಕಟ್ಟಡ ಕಾರ್ಮಿಕರು ಕೆಲಸದ ಸ್ಥಳದಲ್ಲಿ **ಮರಣ** ಹೊಂದಿದ್ದಲ್ಲಿ **ರೂ.8,00,000/- ಹಾಗೂ** ಸಂಪೂರ್ಣ ಶಾಶ್ವತ ದುರ್ಬಲತೆಯಾದಲ್ಲಿ **ರೂ. 2,00,000/-.**
12. **ಪ್ರಮುಖ ವೈದ್ಯಕೀಯ ವೆಚ್ಚ ಸಹಾಯಧನ (ಕಾರ್ಮಿಕ ಚಿಕಿತ್ಸಾ ಭಾಗ್ಯ):** ಹೃದ್ರೋಗ, ಕಿಡ್ನಿ ಜೋಡಣೆ, ಕ್ಯಾನ್ಸರ್ ಚಿಕಿತ್ಸೆ, ಕಣ್ಣಿನ ಶಸ್ತ್ರ ಚಿಕಿತ್ಸೆ, ಪಾರ್ಶ್ವವಾಯು, ಮೂಳೆ ಶಸ್ತ್ರಚಿಕಿತ್ಸೆ, ಗರ್ಭಕೋಶ ಶಸ್ತ್ರಚಿಕಿತ್ಸೆ, ಅಸ್ತಮಚಿಕಿತ್ಸೆ, ಗರ್ಭಪಾತ ಪ್ರಕರಣಗಳು, ಪಿತ್ತಕೋಶದ ತೊಂದರೆಗೆ ಸಂಬಂಧಿತ ಚಿಕಿತ್ಸೆ, ಮೂತ್ರಪಿಂಡದಲ್ಲಿನ ಕಲ್ಲುತೆಗೆಯುವ ಚಿಕಿತ್ಸೆ, ಮೆದುಳಿನ ರಕ್ತಸ್ರಾವದ ಚಿಕಿತ್ಸೆ, ಅಲ್ಸರ್ ಚಿಕಿತ್ಸೆ, ಡಯಾಲಿಸಿಸ್ ಚಿಕಿತ್ಸೆ , ಕಿಡ್ನಿಶಸ್ತ್ರ ಚಿಕಿತ್ಸೆ, ಇ.ಎನ್.ಟಿ ಚಿಕಿತ್ಸೆ, ಶಸ್ತ್ರ ಚಿಕಿತ್ಸೆ, ನರರೋಗ ಶಸ್ತ್ರಚಿಕಿತ್ಸೆ, ವ್ಯಾಸ್ಕುಲರ್ ಶಸ್ತ್ರಚಿಕಿತ್ಸೆ, ಅನ್ನನಾಳದ ಚಿಕಿತ್ಸೆ ಮತ್ತು ಶಸ್ತ್ರ ಚಿಕಿತ್ಸೆ, ವ್ಯಾಸ್ಕುಲರ್ ಶಸ್ತ್ರಚಿಕಿತ್ಸೆ, ಅನ್ನನಾಳದ ಚಿಕಿತ್ಸೆ ಮತ್ತು ಶಸ್ತ್ರ ಚಿಕಿತ್ಸೆ, ಕರುಳಿನ ಶಸ್ತ್ರಚಿಕಿತ್ಸೆ, ಸ್ತನ ಸಂಬಂಧಿತ ಚಿಕಿತ್ಸೆ ಮತ್ತು ಶಸ್ತ್ರಚಿಕಿತ್ಸೆ, ಹರ್ನಿಯ ಶಸ್ತ್ರಚಿಕಿತ್ಸೆ, ಅಪೆಂಡಿಕ್ಸ್ ಶಸ್ತ್ರಚಿಕಿತ್ಸೆ, ಮೂಳೆಮುರಿತ/ ಡಿಸ್‌ಲೊಕೇಶನ್ ಚಿಕಿತ್ಸೆ, ಇತರೆ ಔದ್ಯೋಗಿಕ ಖಾಯಿಲೆಗಳ ಚಿಕಿತ್ಸೆಗಳಿಗೆ **ರೂ.2,00,000/-ವರೆಗೆ.**
13. **ಮದುವೆ ಸಹಾಯ ಧನ (ಗೃಹ ಲಕ್ಷ್ಮೀ ಬಾಂಡ್):** ಫಲಾನುಭವಿ ಅಥವಾ ಅವರ ಇಬ್ಬರು ಮಕ್ಕಳ ಮದುವೆಗೆ **ತಲಾ ರೂ. 60,000/-.**
14. **ತಾಯಿ ಮಗು ಸಹಾಯ ಹಸ್ತ:** ಮಹಿಳಾ ಫಲಾನುಭವಿಯು ಮಗುವಿಗೆ ಜನ್ಮ ನೀಡಿದ ಸಂದರ್ಭದಲ್ಲಿ ಆಕೆಯ ಮಗುವಿನ ಶಾಲಾ ಪೂರ್ವಶಿಕ್ಷಣ ಮತ್ತು ಪೌಷ್ಠಿಕತೆಗಾಗಿ ಮಗುವಿಗೆ ಮೂರು ವರ್ಷಗಳು ತುಂಬುವವರೆಗೆ ವಾರ್ಷಿಕ **ರೂ. 6,000/- ಗಳ** ಸಹಾಯಧನ.
15. **ಸುರಕ್ಷತಾ ಕಿಟ್:** ನೋಂದಾಯಿತ ಕಾರ್ಮಿಕರ ವೃತ್ತಿಗನುಗುಣವಾಗಿ ಸುರಕ್ಷತಾ ಕಿಟ್‌ಗಳ ವಿತರಣೆ
16. **ಸಂಚಾರಿ ಆರೋಗ್ಯ ಕ್ಲಿನಿಕ್ ಯೋಜನೆ:** ನೋಂದಾಯಿತ ಕಾರ್ಮಿಕರು ಹಾಗೂ ಅವರ ಅವಲಂಬಿತರಿಗೆ ಆರೋಗ್ಯ ತಪಾಸಣೆ ಮಾಡುವ ಮೂಲಕ ಅವಶ್ಯಕ ಔಷಧೋಪಚಾರಗಳ ವಿತರಣೆ
17. **ಪ್ರೀವೆಂಟಿವ್ ಹೆಲ್ತ್ ಕೇರ್ ಯೋಜನೆ:** ನೋಂದಾಯಿತ ಕಾರ್ಮಿಕರು ಹಾಗೂ ಅವರ ಅವಲಂಬಿತರಿಗೆ ಆರೋಗ್ಯದ ಮುನ್ನೆಚ್ಚರಿಗಾಗಿ ನಿಗಧಿತ 23 ರೀತಿಯ ವೈದ್ಯಕೀಯ ಪರೀಕ್ಷೆಗಳನ್ನು ನಡೆಸಿ ವೈದ್ಯಕೀಯ ವರದಿಗಳ ವಿತರಣೆ

**ಆಯುಕ್ತರು**
**ಕಾರ್ಮಿಕ ಇಲಾಖೆ**

ವಿಧಾನ ಪರಿಷತ್ತಿನ ಮಾನ್ಯ ಸದಸ್ಯರಾದ ಶ್ರೀ ಪ್ರದೀಪ್ ಶೆಟ್ಟರ್ (ಸ್ಥಳೀಯ ಸಂಸ್ಥೆಗಳಿಂದ ಚುನಾಯಿತರಾದವರು) ಇವರ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 2323(2128)ಕ್ಕೆ

## ಅನುಬಂಧ-2

## ಧಾರವಾಡ ನಗರ ಪ್ರದೇಶ ಹಾಗೂ ಹುಬ್ಬಳ್ಳಿ ಸೆಂಟ್ರಲ್ ವಿಧಾನ ಸಭಾ ಕ್ಷೇತ್ರ ವ್ಯಾಪ್ತಿಯ ನೋಂದಾಯಿತ ಫಲಾನುಭವಿಗಳು ಕಳೆದ ಮೂರು ವರ್ಷಗಳಿಂದ ಪಡೆದುಕೊಂಡಿರುವ ಸಹಾಯಧನದ ವಿವರಗಳು

| ಕ್ರ. ಸಂ. | ಸೌಲಭ್ಯ | ಮಂಜೂರಾದ ಅರ್ಜಿಗಳ ಸಂಖ್ಯೆ | ಬಿಡುಗಡೆಯಾದ ಮೊತ್ತ (ರೂ.ಗಳಲ್ಲಿ) |
|---|---|---|---|
| 01 | Accident Assistance | 10 | 46,60,000 |
| 02 | Assistance for Major Ailments | 88 | 39,31,296 |
| 03 | Continuation of Disability Pension | 1 | 26,000 |
| 04 | Continuation of Pension | 212 | 84,00,000 |
| 05 | Delivery Assistance | 44 | 22,00,000 |
| 06 | Disability Pension | 2 | 3,16,000 |
| 07 | Funeral Expense and Ex-gratia | 318 | 2,70,00,000 |
| 08 | Marriage Assistance | 1,477 | 8,86,20,000 |
| 09 | Medical Assistance | 30 | 5,41,000 |
| 10 | Pension Scheme | 186 | 25,50,000 |
| 11 | Thayi Magu Sahaya Hasta | 4 | 24,000 |
| 12 | Education Assistance | 11,010 | 7,07,37,200 |
| **Grand Total** | | 13,382 | 20,90,05,496 |

ಆಯುಕ್ತರು
ಕಾರ್ಮಿಕ ಇಲಾಖೆ